**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು**

**ಸಿಸಿ ಸಂಖ್ಯೆ: 2670/2021**

ಫಿರ್ಯಾದಿ : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ಗ್ರಾಮಾಂತರ ಪೊಲೀಸ್ ಠಾಣೆ, ನಂಜನಗೂಡು.

ವಿರುದ್ಧ

ಆರೋಪಿತರು : ಶ್ರೀ ಸೋಮೇಶ ಮತ್ತು ಇನ್ನೊಬ್ಬ

:: ದೋಷಾರೋಪಣೆ ::

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿತರಾದ-

1) ಶ್ರೀ ಸೋಮೇಶ ಬಿನ್ ಬಸವಯ್ಯ
ವಯಸ್ಸು ಸುಮಾರು 43 ವರ್ಷ,

2) ಶ್ರೀಮತಿ ಮಲ್ಲಿಗಮ್ಮ
ವಯಸ್ಸು ಸುಮಾರು 34 ವರ್ಷ,

ಹುಸ್ಕೂರು ಗ್ರಾಮ, ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ಮೊದಲನೆಯದಾಗಿ, ದಿನಾಂಕ 27.12.2020 ರಂದು ಮಧ್ಯಾಹ್ನ 12.30 ಗಂಟೆ ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಹುಸ್ಕೂರು ಗ್ರಾಮದ ಅಂಬೇಡ್ಕರ್ ಪ್ರತಿಮೆಯ ಬಳಿ ಸಾರ್ವಜನಿಕ ರಸ್ತೆಯಲ್ಲಿ ಚಾಸಾ-1- ಶ್ರೀಮತಿ.ಕುಮಾರಿಯವರು ಓಟು ಮಾಡಿ ವಾಪಾಸ್ಸು ಮನೆಗೆ ಹೋಗುತ್ತಿರುವಾಗ ಆರೋಪಿಗಳಾದ ನೀವು ಹಳೆಯ ದ್ವೇಷದಿಂದ ಚಾಸಾ-1 ರವರನ್ನು ಅಡ್ಡಗಟ್ಟಿ ನಿಲ್ಲಿಸಿಕೊಂಡು ಒಂದು ಎಲ್ಲೆಯಿಂದಾಚೆಗೆ ಮುಂದೆ ಹೋಗದಂತೆ ಅಕ್ರಮವಾಗಿ ಪ್ರತಿಬಂಧಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳಾದ ನೀವು ಚಾಸಾ-1 ರವರಿಗೆ ಕೈಯಿಂದ ಮೈಕೈ ಗೆ ಹೊಡೆದು ನೋವುಂಟು

ಮಾಡಿದ್ದು, ಆರೋಪಿಗಳ ಪೈಕಿ 2 ನೇ ಆರೋಪಿಯಾದ ನೀವು ಚಾಸಾ-1 ರವರನ್ನು ಕೆಳಕ್ಕೆ ತಳ್ಳಿ, ಕೆಡವಿಕೊಂಡು ಚಾಸಾ-1ರವರ ಹೊಟ್ಟೆ, ಮೈಕೈಯನ್ನು ತುಳಿದು ನೋವುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ನೀನು ನನ್ನ ಹೆಂಡತಿ ಜೊತೆ ಏಕೆ ಗಲಾಟೆ ಮಾಡಿದ್ದೀಯಾ ಎಂದು ಸಾಕ್ಷಿ-01 ರವರನ್ನು ಹಿಡಿದು ಎಳೆದಾಡಿ ಆಕೆಗೆ ಮಾನಭಂಗ ಮಾಡುವ ಉದ್ದೇಶದಿಂದ ಚಾಸಾ-1 ರವರ ಮೇಲೆ ಅಪರಾಧಿಕ ಬಲ ಪ್ರಯೋಗ ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆ ಕಲಂ 354 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ನಾಲ್ಕನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-2 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಮಾಕರಾಯುಧವಾದ ದೊಣ್ಣೆಯಿಂದ ಚಾಸಾ-1 ರವರ ಎಡಭಾಗದ ಕತ್ತಿಗೆ ಸ್ವಇಚ್ಛೆಯಿಂದ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಐದನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಯಾದ ನೀವು ಚಾಸಾ-1 ರವರನ್ನು ಉದ್ದೇಶಿಸಿ "ಈ ದಿನ ನೀನು ಬಚಾವಾಗಿದ್ದೀಯಾ, ನಿನ್ನನ್ನು ಮುಗಿಸುವ ತನಕ ಬಿಡುವುದಿಲ್ಲ" ಎಂದು ಜೀವ ಬೆದರಿಕೆ ಹಾಕಿದ್ದು, ಆ ಮೂಲಕ ಚಾಸಾ-1 ರವರು ಹೆದರುವಂತೆ ಮಾಡಿ ಅವರು ಕಾನೂನು ಸಮ್ಮತವಾಗಿ ಮಾಡಬೇಕಾಗಿರುವ ಕೃತ್ಯವನ್ನು ಮಾಡದಂತೆ ಅಥವಾ ಕಾನೂನು ಸಮ್ಮತವಾಗಿ ಮಾಡಬಾರದ ಕೃತ್ಯವನ್ನು ಮಾಡುವಂತೆ ಅಪಾಯದ ಭೀತಿಯನ್ನು ಹುಟ್ಟಿಸಿ ಅಪರಾಧಿಕ ಭಯೋತ್ಪಾದನೆಯನ್ನು ಉಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 506 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ

ಸಂಜ್ಞಾನದಲ್ಲಿ ಎಸಗಿರುವಿರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ-1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 1 ನೇ ಆರೋಪಿಗಳಾದ ನೀವು ಚಾಸಾ-1 ರವರ ಮಾನಕ್ಕೆ ಕುಂದುಂಟು ಮಾಡುವ ಉದ್ದೇಶದಿಂದ ಚಾಸಾ-1 ರವರಿಗೆ ಬಡ್ಡಿ, ಸೂಳೆ ಎಂದು ಬೈದಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 509 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1- ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

1 ನೇ ಆರೋಪಿ ಉತ್ತರಃ 2 ನೇ ಆರೋಪಿ ಉತ್ತರಃ

ಪ್ರಶ್ನೆ:2- ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ನೇ ಆರೋಪಿ ಉತ್ತರಃ 2 ನೇ ಆರೋಪಿ ಉತ್ತರಃ

(ಆರೋಪಿತರಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿತರು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 20.01.2025.

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.